**All India Radio: Bangalore**
**National Bulletin In Kannada**
**16.12.2025 7.35 am**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**16.12.2025 7.35 am**

**<>><><*><><<>**

ಮುಖ್ಯಾಂಶಗಳು

೧. ಜೋರ್ಡಾನ್ ದೊರೆಯೊಂದಿಗೆ ಪ್ರಧಾನಿ ನರೇಂದ್ರ ಮೋದಿ ನಿಯೋಗ ಮಟ್ಟದ ಮಾತುಕತೆ

೨. ಕರ್ನಾಟಕಕ್ಕೆ ಇಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಭೇಟಿ

೩. ಶೇಕಡ ೮.೨ ರಷ್ಟು ಬೆಳವಣಿಗೆ ದರದೊಂದಿಗೆ ಭಾರತ ವೇಗವಾಗಿ ಬೆಳೆಯುತ್ತಿರುವ ಪ್ರಮುಖ ಆರ್ಥಿಕತೆ- ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್

೪. ಹತ್ತೊಂಬತ್ತು ವರ್ಷದೊಳಗಿನ ಏಷ್ಯಾ ಕಪ್ ಕ್ರಿಕೆಟ್: ಇಂದು ಭಾರತ- ಮಲೇಷ್ಯಾ ಮುಖಾಮುಖಿ

**<>><><*><><<>**

ಪ್ರಧಾನಿ ನರೇಂದ್ರ ಮೋದಿ ಅವರು ನಿನ್ನೆ ಅಮನ್‌ನಲ್ಲಿ ಜೋರ್ಡಾನ್ ದೊರೆ ಎರಡನೇ ಅಬ್ದುಲ್ಲಾ ಇಬ್ನ್ ಅಲ್ ಹುಸೇನ್ ಅವರೊಂದಿಗೆ ನಿಯೋಗ ಮಟ್ಟದ ಮಾತುಕತೆ ನಡೆಸಿದರು. ೭೫ ವರ್ಷಗಳ ರಾಜತಾಂತ್ರಿಕ ಸಂಬಂಧಗಳನ್ನು ಆಚರಿಸಲು ಸಿದ್ಧತೆ ನಡೆಸುತ್ತಿರುವ ಈ ಸಂದರ್ಭದಲ್ಲಿ ಭಾರತ- ಜೋರ್ಡಾನ್ ನಡುವಿನ ನಿಕಟ ಪಾಲುದಾರಿಕೆಯನ್ನು ಒತ್ತಿ ಹೇಳಿದರು. ಭಯೋತ್ಪಾದನೆ, ಉಗ್ರವಾದ ಮತ್ತು ಮೂಲಭೂತವಾದದ ವಿರುದ್ಧ ಜೋರ್ಡಾನ್‌ನ ದೃಢನಿಶ್ಚಯದ ನಿಲುವನ್ನು ಪ್ರಧಾನಿ ಮೋದಿ ಶ್ಲಾಘಿಸಿದರು. ಭಯೋತ್ಪಾದನೆಯನ್ನು ಎದುರಿಸುವಲ್ಲಿ ಭಾರತ ಮತ್ತು ಜೋರ್ಡಾನ್ ಸಾಮಾನ್ಯ ವಿಧಾನವನ್ನು ಹಂಚಿಕೊಂಡಿವೆ ಎಂದು ಅವರು ಹೇಳಿದರು. ಭಯೋತ್ಪಾದನೆಯನ್ನು ಎದುರಿಸುವಲ್ಲಿ ಭಾರತದ ಪ್ರಯತ್ನಗಳಿಗೆ ಜೋರ್ಡಾನ್‌ನ ಬಲವಾದ ಬೆಂಬಲವನ್ನು ರಾಜ ಎರಡನೇ ಅಬ್ದುಲ್ಲಾ ಪುನರುಚ್ಚರಿಸಿದರು. ಮೂರು ರಾಷ್ಟ್ರಗಳ ಭೇಟಿಯ ಎರಡನೇ ಚರಣದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು, ಎರಡು ದಿನಗಳ ಭೇಟಿಗಾಗಿ ಇಂದು ಸಂಜೆ ಇಥಿಯೋಪಿಯಾದ ರಾಜಧಾನಿ ಅಡಿಸ್ ಅಬಾಬಾಗೆ ತಲುಪಲಿದ್ದಾರೆ. ಅವರು ಇಥಿಯೋಪಿಯಾ ಪ್ರಧಾನಿ ಡಾ. ಅಬಿಯ್ ಅಹ್ಮದ್ ಅಲಿ ಅವರೊಂದಿಗೆ ದ್ವಿಪಕ್ಷೀಯ ಸಂಬಂಧಗಳ ಎಲ್ಲಾ ಅಂಶಗಳ ಕುರಿತು ವ್ಯಾಪಕ ಚರ್ಚೆ ನಡೆಸಲಿದ್ದಾರೆ. ಜಾಗತಿಕ ದಕ್ಷಿಣದಲ್ಲಿ ಪಾಲುದಾರರಾಗಿ, ಪ್ರಧಾನ ಮಂತ್ರಿಯವರ ಭೇಟಿಯು ಸ್ನೇಹದ ನಿಕಟ ಸಂಬಂಧಗಳನ್ನು ಬಲಪಡಿಸುವ ಮತ್ತು ದ್ವಿಪಕ್ಷೀಯ ಸಹಕಾರವನ್ನು ವಿಸ್ತರಿಸುವ ಎರಡೂ ದೇಶಗಳ

ಹಂಚಿಕೆಯ ಬದ್ಧತೆಯನ್ನು ಪುನರುಚ್ಚರಿಸುತ್ತದೆ. ಪ್ರವಾಸದ ಅಂತಿಮ ಚರಣದಲ್ಲಿ, ಪ್ರಧಾನಿ ನರೇಂದ್ರ ಮೋದಿ ಅವರು, ಒಮಾನ್‌ಗೆ ಭೇಟಿ ನೀಡಲಿದ್ದು, ಸುಲ್ತಾನ್ ಹೈತಮ್ ಇಬ್ನ್ ತಾರಿಕ್ ಅವರನ್ನು ಭೇಟಿ ಮಾಡಲಿದ್ದಾರೆ. ಈ ಭೇಟಿಯು ಎರಡೂ ದೇಶಗಳ ನಡುವಿನ ರಾಜತಾಂತ್ರಿಕ ಸಂಬಂಧಗಳ ಸ್ಥಾಪನೆಯ ೭೦ ವರ್ಷಗಳನ್ನು ಗುರುತಿಸುತ್ತದೆ.

<>><><*><><<>

ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದಿನಿಂದ ಕರ್ನಾಟಕ, ತಮಿಳುನಾಡು ಮತ್ತು ತೆಲಂಗಾಣಕ್ಕೆ ಏಳು ದಿನಗಳ ಭೇಟಿ ನೀಡಲಿದ್ದಾರೆ. ರಾಷ್ಟ್ರಪತಿಯವರು ಇಂದು ಕರ್ನಾಟಕದ ಮಳವಳ್ಳಿಯಲ್ಲಿ ಆದಿ ಜಗದ್ಗುರು ಶ್ರೀ ಶಿವರಾತ್ರೀಶ್ವರ ಶಿವಯೋಗಿ ಮಹಾಸ್ವಾಮಿಜಿ ಅವರ ೧೦೬೬ ನೇ ಜಯಂತಿ ಆಚರಣೆಯನ್ನು ಉದ್ಘಾಟಿಸಲಿದ್ದಾರೆ.  ನಾಳೆ ಅವರು ತಮಿಳುನಾಡಿನ ವೆಲ್ಲೂರಿನ ಸುವರ್ಣ ದೇವಾಲಯದಲ್ಲಿ ದರ್ಶನ ಮತ್ತು ಆರತಿ ಮಾಡಲಿದ್ದಾರೆ. ನಂತರ, ಅವರು ಚಳಿಗಾಲದ ವಾಸ್ತವ್ಯಕ್ಕಾಗಿ ಸಿಕಂದರಾಬಾದ್‌ನ ಬೊಲಾರಂನಲ್ಲಿರುವ ರಾಷ್ಟ್ರಪತಿ ನಿಲಯವನ್ನು ತಲುಪಲಿದ್ದಾರೆ. ಇದೇ ೧೯ ರಂದು ಹೈದರಾಬಾದ್‌ನಲ್ಲಿ ತೆಲಂಗಾಣ ಸಾರ್ವಜನಿಕ ಸೇವಾ ಆಯೋಗವು ಆಯೋಜಿಸಿರುವ ಸಾರ್ವಜನಿಕ ಸೇವಾ ಆಯೋಗಗಳ ಅಧ್ಯಕ್ಷರಿಗಾಗಿ ರಾಷ್ಟ್ರೀಯ ಸಮ್ಮೇಳನವನ್ನು ರಾಷ್ಟ್ರಪತಿಯವರು ಉದ್ಘಾಟಿಸಲಿದ್ದಾರೆ.  ಇದೇ ೨೦ ರಂದು, ಹೈದರಾಬಾದ್‌ನಲ್ಲಿ ಬ್ರಹ್ಮಕುಮಾರಿ ಶಾಂತಿ ಸರೋವರವು ತನ್ನ ೨೧ನೇ ವಾರ್ಷಿಕೋತ್ಸವವನ್ನು ಆಚರಿಸಲು ಆಯೋಜಿಸಿರುವ 'ಭಾರತದ ಕಾಲಾತೀತ ಜ್ಞಾನ: ಶಾಂತಿ ಮತ್ತು ಪ್ರಗತಿಯ ಹಾದಿಗಳು' ಕುರಿತು ಸಮ್ಮೇಳನವನ್ನು ಉದ್ದೇಶಿಸಿ ರಾಷ್ಟ್ರಪತಿ ದ್ರೌಪದಿ ಮುರ್ಮು ಮಾತನಾಡಲಿದ್ದಾರೆ.

<>><><*><><<>

ಲೋಕಸಭೆಯಲ್ಲಿ ನಿನ್ನೆ ಮಂಡಿಸಲಾದ ವಿಕಸಿತ ಭಾರತ್ ಶಿಕ್ಷಾ ಅಧಿಷ್ಠಾನ ಮಸೂದೆ ೨೦೨೫ ಅನ್ನು ಹೆಚ್ಚಿನ ಪರಿಶೀಲನೆಗಾಗಿ ಸಂಸತ್ತಿನ ಜಂಟಿ ಸಮಿತಿಗೆ ಶಿಫಾರಸು ಮಾಡಲಾಗಿದೆ. ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರು ಸದನದಲ್ಲಿ ಮಸೂದೆಯನ್ನು ಪರಿಚಯಿಸಿದರು. ಆದಾಗ್ಯೂ, ವಿರೋಧ ಪಕ್ಷದ ಸದಸ್ಯರು ಮಸೂದೆಯನ್ನು ಪರಿಚಯಿಸುವುದನ್ನು ವಿರೋಧಿಸಿದರು. ವ್ಯವಹಾರ ಸಲಹಾ ಸಮಿತಿ ಸಭೆಯಲ್ಲಿ, ಹಲವಾರು ಸಂಸದರು ಮಸೂದೆಯ ಕುರಿತು ವ್ಯಾಪಕ ಸಮಾಲೋಚನೆಗಳಿಗೆ ಒತ್ತು ನೀಡಿದ್ದಾರೆ. ಅವರ ಕೋರಿಕೆಯನ್ನು ಪರಿಗಣಿಸಿ, ಸರ್ಕಾರವು ಮಸೂದೆಯನ್ನು ವ್ಯಾಪಕ ಸಮಾಲೋಚನೆಗಾಗಿ ಸಂಸತ್ತಿನ ಜಂಟಿ ಸಮಿತಿಗೆ ಕಳುಹಿಸಲು ಪ್ರಸ್ತಾಪಿಸಿದೆ ಎಂದು ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಹೇಳಿದರು. ಸಮಿತಿಯ ರಚನೆಗೆ ಸದಸ್ಯರನ್ನು ನೇಮಿಸುವಂತೆ ರಿಜಿಜು ಅವರು ಲೋಕಸಭಾಧ್ಯಕ್ಷರಿಗೆ ಮನವಿ

ಮಾಡಿದರು. ವಿಕಸಿತ ಭಾರತ ಶಿಕ್ಷಾ ಅಧಿಷ್ಠಾನ ಮಸೂದೆಯು ವಿಶ್ವವಿದ್ಯಾಲಯಗಳು ಮತ್ತು ಇತರ ಉನ್ನತ ಶಿಕ್ಷಣ ಸಂಸ್ಥೆಗಳಿಗೆ ಬೋಧನೆ, ಕಲಿಕೆ, ಸಂಶೋಧನೆ ಮತ್ತು ನಾವೀನ್ಯತೆಯಲ್ಲಿ ಶ್ರೇಷ್ಠತೆಯನ್ನು ಸಾಧಿಸಲು ಅಧಿಕಾರ ನೀಡುವ ಗುರಿಯನ್ನು ಹೊಂದಿದೆ.

<>><><*><><<>

ಭಾರತ ಪರಿವರ್ತನೆಗಾಗಿ ಪರಮಾಣು ಶಕ್ತಿಯ ಸುಸ್ಥಿರ ಬಳಕೆ ಮತ್ತು ಪ್ರಗತಿ ಮಸೂದೆ ೨೦೨೫ ಅನ್ನು ನಿನ್ನೆ ಲೋಕಸಭೆಯಲ್ಲಿ ಮಂಡಿಸಲಾಯಿತು. ಪರಮಾಣು ಇಂಧನ ಖಾತೆ ರಾಜ್ಯ ಸಚಿವ ಡಾ. ಜಿತೇಂದ್ರ ಸಿಂಗ್, ಈ ಮಸೂದೆಯನ್ನು ಮಂಡಿಸಿದರು. ದೇಶವಾಸಿಗಳ ಕಲ್ಯಾಣಕ್ಕಾಗಿ ಪರಮಾಣು ವಿದ್ಯುತ್ ಉತ್ಪಾದನೆಗೆ ಪರಮಾಣು ಶಕ್ತಿ ಮತ್ತು ವಿಕಿರಣವನ್ನು ಅಭಿವೃದ್ಧಿಪಡಿಸುವ ಗುರಿಯನ್ನು ಈ ಮಸೂದೆ ಹೊಂದಿದೆ. ಅದರ ಸುರಕ್ಷಿತ ಬಳಕೆಗಾಗಿ ಇದು ದೃಢವಾದ ನಿಯಂತ್ರಕ ಚೌಕಟ್ಟನ್ನು ಒದಗಿಸಲು ಸಹ ಪ್ರಯತ್ನಿಸುತ್ತದೆ. ಪರಮಾಣು ಶಕ್ತಿ ನಿಯಂತ್ರಣ ಮಂಡಳಿ ಮತ್ತು ಪರಮಾಣು ಶಕ್ತಿ ಪರಿಹಾರ ಸಲಹಾ ಮಂಡಳಿಯನ್ನು ಸ್ಥಾಪಿಸಲು ಮಸೂದೆ ಪ್ರಯತ್ನಿಸುತ್ತದೆ. ಪರಮಾಣು ಘಟನೆಯ ಸಂದರ್ಭದಲ್ಲಿ ಕೇಂದ್ರ ಸರ್ಕಾರದ ಹೊಣೆಗಾರಿಕೆಯನ್ನು ಸಹ ಮಸೂದೆ ಒದಗಿಸುತ್ತದೆ. ಮಸೂದೆಯ ಅಡಿಯಲ್ಲಿ ತನ್ನ ಹೊಣೆಗಾರಿಕೆಯನ್ನು ಪೂರೈಸುವ ಉದ್ದೇಶಕ್ಕಾಗಿ ಕೇಂದ್ರ ಸರ್ಕಾರವು ಪರಮಾಣು ಹೊಣೆಗಾರಿಕೆ ನಿಧಿಯನ್ನು ಸ್ಥಾಪಿಸಿದೆ. ವಿರೋಧ ಪಕ್ಷದ ಸದಸ್ಯರು ಮಸೂದೆಯನ್ನು ಪರಿಚಯಿಸುವುದನ್ನು ವಿರೋಧಿಸಿದರು.

<>><><*><><<>

ಜಾಗತಿಕ ಆರ್ಥಿಕ ಬೆಳವಣಿಗೆಯು ಶೇಕಡ ೩.೨ ರಷ್ಟು ಬೆಳವಣಿಗೆ ದರ ದಾಖಲಾಗಿದೆ. ಈ ನಡುವೆಯೂ ಶೇಕಡ ೮.೨ ರಷ್ಟು ಬೆಳವಣಿಗೆ ದರದೊಂದಿಗೆ ಭಾರತ ವೇಗವಾಗಿ ಬೆಳೆಯುತ್ತಿರುವ ಪ್ರಮುಖ ಆರ್ಥಿಕತೆಯಾಗುತ್ತಿದೆ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ. ಲೋಕಸಭೆಯಲ್ಲಿ ನಿನ್ನೆ ಪ್ರಶ್ನೆಯೊಂದಕ್ಕೆ ಉತ್ತರ ನೀಡಿದ ಸಚಿವರು, ೨೦೨೫-೨೬ರ ಪೂರಕ ಅನುದಾನ ಬೇಡಿಕೆಗಳಿಗೆ ಪ್ರಸಕ್ತ ಹಣಕಾಸು ವರ್ಷದಲ್ಲಿ ಪ್ರತಿಯೊಂದು ಜಾಗತಿಕ ಸಂಸ್ಥೆಯೂ ದೇಶದ ಬೆಳವಣಿಗೆಯ ನಿರೀಕ್ಷೆಯನ್ನು ಹೆಚ್ಚಿಸುತ್ತಿದೆ ಎಂದರು.

ಧ್ವನಿ: ನಿರ್ಮಲಾ ಸೀತಾರಾಮನ್ ( ೨೨ ಸೆಕೆಂಡ್ಸ್)

ಭಾರತದ ಆರ್ಥಿಕತೆಯ ಬಗ್ಗೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ನಕಾರಾತ್ಮಕ ಹೇಳಿಕೆಗೆ ಪ್ರತಿಕ್ರಿಯೆ ಕೋರಿದ್ದಕ್ಕಾಗಿ ವಿರೋಧ ಪಕ್ಷವನ್ನು ಟೀಕಿಸಿದ ಸಚಿವರು, ಭಾರತವು ಮೂರು ಪ್ರಮುಖ

ಜಾಗತಿಕ ಸಂಸ್ಥೆಗಳಾದ ಡಿಬಿಆರ್‌ಎಸ್, ಎಸ್ & ಪಿ ಮತ್ತು ಆರ್ & ಐ ನಿಂದ ರೇಟಿಂಗ್ ಅಪ್‌ಗ್ರೇಡ್‌ಗಳನ್ನು ಪಡೆದುಕೊಂಡಿದೆ ಎಂದು ತಿಳಿಸಿದರು. ಎಲೆಕ್ಟ್ರಾನಿಕ್ಸ್, ಔಷಧಗಳು, ಎಂಜಿನಿಯರಿಂಗ್ ಸರಕುಗಳು ಮತ್ತು ರಕ್ಷಣೆಯಂತಹ ಕ್ಷೇತ್ರಗಳಲ್ಲಿ ಭಾರತವು ನಿವ್ವಳ ರಫ್ತುದಾರನಾಗಿ ಹೊರಹೊಮ್ಮಿದೆ ಎಂದು ಸಚಿವೆ ನಿರ್ಮಲಾ ಸೀತಾರಾಮನ್ ಮಾಹಿತಿ ನೀಡಿದರು.

<>><><*><><<>

ಪಶ್ಚಿಮ ಬಂಗಾಳದಲ್ಲಿ ಇಂದು ವಿಶೇಷ ತೀವ್ರ ಪರಿಷ್ಕರಣೆಯ ಮೊದಲ ಹಂತದ ಅಡಿಯಲ್ಲಿ ಕರಡು ಮತದಾರರ ಪಟ್ಟಿಯನ್ನು ಚುನಾವಣಾ ಆಯೋಗ ಪ್ರಕಟಿಸಲಿದೆ. ಕರಡು ಮತದಾರರ ಪಟ್ಟಿಯನ್ನು ಪ್ರಕಟಿಸುವ ಮೊದಲು, ಆಯೋಗವು ವಿಶೇಷ ವೀಕ್ಷಕರನ್ನು ನೇಮಿಸಿತು. ಅವರು ರಾಜ್ಯದ ಅನೇಕ ವಿಧಾನಸಭಾ ಕ್ಷೇತ್ರಗಳಲ್ಲಿ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆಯ ಮೇಲ್ವಿಚಾರಣೆಯಲ್ಲಿ ತೊಡಗಿದ್ದಾರೆ.

<>><><*><><<>

ರಾಷ್ಟ್ರವು ಇಂದು ವಿಜಯ ದಿವಸ್ ಆಚರಿಸುತ್ತಿದೆ. ೧೯೭೧ ರ ಯುದ್ಧದಲ್ಲಿ ಪಾಕಿಸ್ತಾನದ ವಿರುದ್ಧ ಭಾರತ ಸಾಧಿಸಿದ ವಿಜಯದ ಸ್ಮರಣಾರ್ಥ ಪ್ರತಿ ವರ್ಷ ಈ ದಿನದಂದು, ವಿಜಯ ದಿವಸ್ ಆಚರಿಸಲಾಗುವುದು. ಪ್ರತಿಯೊಬ್ಬ ಭಾರತೀಯರಿಗೂ ಸ್ಫೂರ್ತಿ ನೀಡುವ ಮತ್ತು ರಾಷ್ಟ್ರೀಯ ಹೆಮ್ಮೆಯ ಮೂಲವಾಗಿ ಉಳಿದಿರುವ ಧೈರ್ಯಶಾಲಿಗಳ ಅಂತಿಮ ತ್ಯಾಗವನ್ನು ರಾಷ್ಟ್ರವು ಸ್ಮರಿಸುತ್ತದೆ. ೧೯೭೧ ರ ಈ ದಿನದಂದು, ಪಾಕಿಸ್ತಾನಿ ಪಡೆಗಳ ಮುಖ್ಯಸ್ಥ ಜನರಲ್ ಎ.ಎ.ಖಾನ್ ನಿಯಾಜಿ, ೯೩ ಸಾವಿರ ಸೈನಿಕರೊಂದಿಗೆ, ಭಾರತೀಯ ಸೇನೆಗೆ ಶರಣಾದರು. ಯುದ್ಧದ ಅಂತ್ಯವು ಪೂರ್ವ ಪಾಕಿಸ್ತಾನವನ್ನು ಬೇರ್ಪಡಿಸಿ, ಬಾಂಗ್ಲಾದೇಶ ಉದಯಕ್ಕೆ ಕಾರಣವಾಯಿತು. ವಿಜಯ್ ದಿವಸ್ ಮುನ್ನಾದಿನವಾದ ನಿನ್ನೆ ಭಾರತೀಯ ಸೇನೆಯು ನವದೆಹಲಿಯ ಸೇನಾ ಭವನದಲ್ಲಿ 'ವಿಜಯ್ ದಿವಸ್ ಅಟ್ ಹೋಮ್' ಅನ್ನು ಆಯೋಜಿಸಿತ್ತು. ಈ ಕಾರ್ಯಕ್ರಮದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಭಾಗವಹಿಸಿದ್ದರು. ಈ ವೇಳೆ, ಸ್ಥಳೀಯವಾಗಿ ಅಭಿವೃದ್ಧಿಪಡಿಸಿದ ಯುದ್ಧ ಸಾಧನಗಳನ್ನು ಪ್ರದರ್ಶಿಸಲಾಯಿತು. ಇದು ಭಾರತೀಯ ಸೇನೆಯು ಆಧುನಿಕ, ನವೀನ ಮತ್ತು ಸ್ವಾವಲಂಬಿ ಶಕ್ತಿಯಾಗಿ ಸ್ಥಿರವಾಗಿ ರೂಪಾಂತರಗೊಳ್ಳುವುದನ್ನು ಪ್ರತಿಬಿಂಬಿಸುತ್ತದೆ.

<>><><*><><<>

೧೯ ವರ್ಷದೊಳಗಿನ ಪುರುಷರ ಏಷ್ಯಾ ಕಪ್ ಕ್ರಿಕೆಟ್‌ನಲ್ಲಿ, ಭಾರತ ತಂಡ, ಇಂದು ದುಬೈನ ಸೆವೆನ್ಸ್ ಕ್ರೀಡಾಂಗಣದಲ್ಲಿ ತನ್ನ ಮೂರನೇ ಗುಂಪು ಹಂತದ ಪಂದ್ಯದಲ್ಲಿ ಮಲೇಷ್ಯಾ ತಂಡವನ್ನು ಎದುರಿಸಲಿದೆ. ಪಂದ್ಯ ಭಾರತೀಯ ಕಾಲಮಾನ ಬೆಳಗ್ಗೆ ೧೦:೩೦ ಕ್ಕೆ ಆರಂಭವಾಗಲಿದೆ.

ಭಾನುವಾರ ದುಬೈನಲ್ಲಿ ನಡೆದ ಎರಡನೇ ಪಂದ್ಯದಲ್ಲಿ ಪಾಕಿಸ್ತಾನ ವಿರುದ್ಧ ೯೦ ರನ್‌ಗಳ ಅಂತರದಿಂದ ಜಯ ಸಾಧಿಸಿದ ನಂತರ ಆಯುಷ್ ಮ್ಹಾತ್ರೆ ನೇತೃತ್ವದ ಭಾರತ ತಂಡ, ತನ್ನ ಗೆಲುವಿನ ಓಟವನ್ನು ಮುಂದುವರಿಸಲು ಎದುರು ನೋಡುತ್ತಿದೆ. ಆರನ್ ಜಾರ್ಜ್ ೮೮ ಎಸೆತಗಳಲ್ಲಿ ೮೫ ರನ್ ಗಳಿಸುವ ಮೂಲಕ ಭಾರತ ೨೪೦ ರನ್ ಗಳಿಸಲು ಸಹಾಯ ಮಾಡಿದರು. ಪ್ರತಿಯಾಗಿ, ಭಾರತೀಯ ಬೌಲರ್‌ಗಳು ಆತಿಥೇಯರನ್ನು ಕೇವಲ ೧೫೦ ರನ್‌ಗಳಿಗೆ ಸೀಮಿತಗೊಳಿಸಿದರು. ಎರಡು ಗುಂಪುಗಳಲ್ಲಿ ಏಷ್ಯಾದ ಒಟ್ಟು ಎಂಟು ತಂಡಗಳು ಸ್ಪರ್ಧಿಸುತ್ತಿವೆ. ಆತಿಥೇಯ ಯುಎಇ, ಪಾಕಿಸ್ತಾನ ಮತ್ತು ಮಲೇಷ್ಯಾ ಜೊತೆಗೆ ಭಾರತ ಎ ಗುಂಪಿನಲ್ಲಿ ಸ್ಪರ್ಧಿಸಿದೆ. ಮತ್ತೊಂದೆಡೆ, ಬಾಂಗ್ಲಾದೇಶ, ಶ್ರೀಲಂಕಾ, ಅಫ್ಘಾನಿಸ್ತಾನ ಮತ್ತು ನೇಪಾಳ ತಂಡಗಳು ಬಿ ಗುಂಪಿನಲ್ಲಿ ಸ್ಪರ್ಧಿಸಿವೆ. ಎರಡೂ ಗುಂಪುಗಳ ಅಗ್ರ ೨ ತಂಡಗಳು ಸೆಮಿಫೈನಲ್‌ಗೆ ಅರ್ಹತೆ ಪಡೆಯುತ್ತವೆ. ಅಂತಿಮ ಪಂದ್ಯ ಇದೇ ೨೧ ರಂದು ನಡೆಯಲಿದೆ.

<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>

<>><><ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ ><><<>